# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1261 (1278)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

ವಿಷಯ : ಪರಿಶಿಷ್ಟ ಜಾತಿ ಮತ್ತು ಪಂಗಡದವರ ಸ್ವಾವಲಂಬನೆಯ ಬಗ್ಗೆ

(ಅ) ರಾಜ್ಯದಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪಂಗಡದವರ ಸಂಖ್ಯೆ ಎಷ್ಟು ; ಇವರುಗಳ ಸಾಮಾಜಿಕ ಉನ್ನತೀಕರಣಕ್ಕೆ ಸರ್ಕಾರಗಳು (ರಾಜ್ಯ ಮತ್ತು ಕೇಂದ್ರ) ಕೈಗೊಂಡಿರುವ ಕ್ರಮಗಳೇನು ; ಕಳೆದ ಐದು ವರ್ಷಗಳಲ್ಲಿ ನೀಡಲಾಗಿರುವ ಒಟ್ಟು ಅನುದಾನವೆಷ್ಟು ; (ಮಾಹಿತಿ ನೀಡುವುದು)

(ಆ) ಪರಿಶಿಷ್ಟ ಜಾತಿ ಮತ್ತು ಪಂಗಡದವರು ಪೂರ್ಣ ಸ್ವಾವಲಂಬನೆ ಸಾಧಿಸಿ ಅಸಮಾನತೆಯಿಂದ ಹೊರಬರಲು ಬೇಕಾಗಬಹುದಾದ ಮೀಸಲಾತಿಯ ಅವಧಿ ಎಷ್ಟು ; ಇನ್ನೂ ಎಷ್ಟು ವರ್ಷ ಮೀಸಲಾತಿ ನೀಡಬೇಕಾಗಬಹುದು ; (ಮಾಹಿತಿ ನೀಡುವುದು)

(ಇ) ಮೀಸಲಾತಿ ಅವಧಿಯ ಬಗ್ಗೆ ಕೇಂದ್ರ ಅಥವಾ ರಾಜ್ಯದ ಯಾವುದಾದರೂ ಸರ್ಕಾರಿ ಆದೇಶವಿದ್ದಲ್ಲಿ ಪ್ರತಿಯನ್ನು ಒದಗಿಸುವುದು ?